# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಗೆ 2016–17ನೇ ಸಾಲಿನ ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ,** ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರ ಪತ್ರ ಸಂಖ್ಯೆ: ಅನಸಾರಾಗ್ರಾಸ/ಎಸಿಟಿ/ಸಿ.ಆರ್–8/2015–16, ದಿನಾಂಕ: 07–09–2016.

**ಪ್ರಸ್ತಾವನೆ:**

2016–17ನೇ ಸಾಲಿಗೆ ಸಂಸ್ಥೆಗೆ ಆವರ್ತಕ ಅನುದಾನವಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಶೇ.50:50ರ ಅನುದಾನದಲ್ಲಿ ರೂ.593.10ಲಕ್ಷ ಅನುದಾನ ಬಿಡುಗಡೆ ಪ್ರಸ್ತಾವನೆಯನ್ನು ಹಾಗೂ ಸಂಸ್ಥೆಯ ಪ್ರಾದೇಶಿಕ ಕೇಂದ್ರಗಳಾದ ಬೆಂಗಳೂರು, ಧಾರವಾಡ ಹಾಗೂ ಗುಲ್ಬರ್ಗಾಗಳಲ್ಲಿ ಸೃಷ್ಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ರೂ.315.04ಲಕ್ಷ ಅನುದಾನದ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

2016–17ನೇ ಸಾಲಿನ ರಾಜ್ಯ ಸರ್ಕಾರದ ಪಾಲಿನ ಆವರ್ತಕ ಅನುದಾನವು ಸಂಸ್ಥೆಯ ಎಲ್ಲಾ ಅಧಿಕಾರಿ/ಸಿಬ್ಬಂದಿಗಳ ವೇತನ ಹಾಗೂ ಕಛೇರಿ ದೈನಂದಿನ ಆಡಳಿತಾತ್ಮಕ ವೆಚ್ಚಗಳನ್ನು ಭರಿಸಲು ಅಗತ್ಯವಿರುವುದರಿಂದ ಈ ಹಿಂದಿನ ಸಾಲುಗಳಲ್ಲಿ ಬಿಡುಗಡೆ ಮಾಡುತ್ತಿದ್ದ ರೀತಿ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

2016–17ನೇ ಆರ್ಥಿಕ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ:2515–00–102–0–08(ಯೋಜನೇತರ) ರಡಿ ರೂ.180ಲಕ್ಷಗಳ ಅನುದಾನಗಳನ್ನು ಹಂಚಿಕೆ ಮಾಡಲಾಗಿದೆ. ಸದರಿ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಸಂಸ್ಥೆಯ ಅಧಿಕಾರಿಗಳು/ಸಿಬ್ಬಂದಿಗಳ ವೇತನ, ಭತ್ಯೆಗಳು, ಸಹಾಯಾನುದಾನಗಳು, ನಿರ್ಮಾಣಗಳಿಗಾಗಿ ಅನುದಾನಗಳನ್ನು ಹಂಚಿಕೆ ಮಾಡಲಾಗಿದೆ.

ಸದರಿ ರೂ.180ಲಕ್ಷಗಳಲ್ಲಿ ಏಪ್ರಿಲ್ 2016 ರಿಂದ ನವೆಂಬರ್ 2016ರ ವರೆಗೆ ಒಟ್ಟು 8 ತಿಂಗಳ ವೇತನ ಹಾಗೂ ಇತರ ಭತ್ಯೆಗಳಿಗಾಗಿ ಒಟ್ಟು ಅನುದಾನ ರೂ.120/- ಲಕ್ಷಗಳನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು. ಇವರಿಗೆ ಬಿಡುಗಡೆ ಮಾಡಲು ಉದ್ದೇಶಿಸಲಾಗಿದೆ. ಅದಕ್ಕಾಗಿ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 217 ಜಿಪಸ 2016, ಬೆಂಗಳೂರು, ದಿನಾಂಕ:19–12–2016.**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಅಧಿಕಾರಿಗಳು/ಸಿಬ್ಬಂದಿಗಳ ವೇತನ ಹಾಗೂ ಇತರೆ ಭತ್ಯೆಗಳಿಗಾಗಿ ಏಪ್ರಿಲ್ 2016 ರಿಂದ ನವೆಂಬರ್ 2016ರ ವರೆಗೆ ಒಟ್ಟು ರೂ.120/-(ಒಂದು ನೂರ ಇಪ್ಪತ್ತು ಲಕ್ಷ ರೂಪಾಯಿಗಳು ಮಾತ್ರ) ಲಕ್ಷಗಳ ಅನುದಾನವನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಗೆ ಬಿಡುಗಡೆಗೊಳಿಸಿ ಆದೇಶಿಸಿದೆ.

ಈ ಅನುದಾನವನ್ನು ಲೆಕ್ಕ ಶೀರ್ಷಿಕೆ:2515–00–102–0–08ರ(ಯೋಜನೇತರ)ರಡಿ ಒದಗಿಸಿರುವ ರೂ.180.00 ಲಕ್ಷಗಳ ಅನುದಾನದ ಪೈಕಿ ಭರಿಸಲು ಮಂಜೂರಾತಿ ನೀಡಲಾಗಿದೆ.

ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು. ಇವರು ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಅನುದಾನವನ್ನು ಮೈಸೂರು ಜಿಲ್ಲಾ ಖಜಾನೆಯಿಂದ ಪೇಯೀಸ್ ರಸೀದಿ ಮೇಲೆ ಹಣ ಸೆಳೆದು ಅನುದಾನವನ್ನು ನಿಗಧಿತ ಉದ್ದೇಶಕ್ಕೆ ಮಾತ್ರ ವಿನಿಯೋಗಿಸುವುದು.

ಎಚ್.ಆರ್.ಎಮ್.ಎಸ್ ನಲ್ಲಿ ಕಡ್ಡಾಯವಾಗಿ ಅಳವಡಿಕೆ ಮಾಡಿಕೊಳ್ಳಲು ತಿಳಿಸಿದೆ.

ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು ಟಿಪ್ಪಣಿ ಸಂಖ್ಯೆ: ಗ್ರಾಅಪ 613 ಪಿಬಿಎಸ್ 2016, ದಿನಾಂಕ: 28-11-2016 ರಲ್ಲಿ ನೀಡಿರುವ ಸಹಮತಿಯನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪಿ.ದೇವಸಹಾಯಂ) 19/12/2016
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

19.12.16

Under Secretary to Govt. (ZP)
Rural Devt. & Pan.Raj Dept
Karnataka Govt. Secretariat

ಇವರಿಗೆ:

1. ಮಹಾಲೇಖಪಾಲರು, (ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ) ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು.
3. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
4. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
5. ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಮೈಸೂರು ಜಿಲ್ಲೆ, ಮೈಸೂರು.
6. ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-6) ಹಾಗೂ ಬಜೆಟ್ ವಿಭಾಗ.
7. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಸಹ ಕಾರ್ಯದರ್ಶಿ (ಆರ್ಥಿಕ ಆಯೋಗ ಕೋಶ), 12ನೇ ಮಹಡಿ, ವಿಶ್ವೇಶ್ವರಯ್ಯ ಟವರ್, ಬೆಂಗಳೂರು.
9. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು/ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು.
10. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.